ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 29–08–2018**

**ಸಂಖ್ಯೆ: 897/997**

**<u>ಪತ್ರಿಕಾ ಪ್ರಕಟಣೆ</u>**

<u>ಪದವಿ ವಿಜ್ಞಾನ ಕಾಲೇಜು ವಿದ್ಯಾರ್ಥಿಗಳಿಗಾಗಿ</u>

## <u>ಕನ್ನಡದಲ್ಲಿ ವಿಜ್ಞಾನ ಉಪನ್ಯಾಸ ಸ್ಪರ್ಧೆ</u>

ಬೆಂಗಳೂರು, ಆಗಸ್ಟ್ 29, (ಕರ್ನಾಟಕ ವಾರ್ತೆ) :

ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ವತಿಯಿಂದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ಕಾಲೇಜು ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಪದವಿ ವಿಜ್ಞಾನ ಕಾಲೇಜು ವಿದ್ಯಾರ್ಥಿಗಳಿಗಾಗಿ ಅಂತರ ವಿಶ್ವವಿದ್ಯಾಲಯದ ಮಟ್ಟ ಮತ್ತು ರಾಜ್ಯಮಟ್ಟದಲ್ಲಿ ಕನ್ನಡ ವಿಜ್ಞಾನ ಉಪನ್ಯಾಸ ಸ್ಪರ್ಧೆಯನ್ನು ರಾಜ್ಯಾದ್ಯಂತ ಆಯೋಗಜಿಸಲಾಗುತ್ತಿದೆ ಎಂದು ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಗೌರವ ಕಾರ್ಯದರ್ಶಿ ಗಿರೀಶ ಕಡ್ಲೇವಾಡ ಅವರು ತಿಳಿಸಿದ್ದಾರೆ.

ವಿಜ್ಞಾನವನ್ನು ಮಾತೃಭಾಷೆಯ ಮೂಲಕ ಜನಸಾಮಾನ್ಯರ ಬಳಿಗೆ ಕೊಂಡೊಯ್ಯುವ, ಶೈಕ್ಷಣಿಕ ವಲಯದಲ್ಲಿ ವಿಜ್ಞಾನವನ್ನು ಜನಪ್ರಿಯಗೊಳಿಸುವ ಉದ್ದೇಶದಿಂದ ಹಾಗೂ ಕನ್ನಡದಲ್ಲಿ ಆಕರ್ಷಕವಾಗಿ ಜನಪ್ರಿಯ ಶೈಲಿಯಲ್ಲಿ ವಿಜ್ಞಾನದ ಸಂವಹನ ಸಾಧ್ಯ ಎಂಬುದನ್ನು ಸಾಬೀತುಗೊಳಿಸಲು ಈ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ.

ರಾಜ್ಯದ ಯಾವುದೇ ವಿಶ್ವವಿದ್ಯಾಲಯದ ಅಡಿಯಲ್ಲಿ ಮೂಲ ವಿಜ್ಞಾನವನ್ನು (ಭೌತ ಶಾಸ್ತ್ರ, ಜೀವಶಾಸ್ತ್ರ, ರಾಸಾಯನಶಾಸ್ತ್ರ, ಗಣಿತ ವಿಷಯಗಳನ್ನು)ವ್ಯಾಸಂಗ ಮಾಡುತ್ತಿರುವ ಪದವಿ ವಿದ್ಯಾರ್ಥಿಗಳು ಈ ಸ್ಪರ್ಧೆಯಲ್ಲಿ ಭಾಗವಹಿಸಬಹುದಾಗಿದೆ.

ಸೆಪ್ಟೆಂಬರ್ ತಿಂಗಳಿನಲ್ಲಿ ನಡೆಯುವ ವಿಶ್ವವಿದ್ಯಾಲಯ ಮಟ್ಟದ ಸ್ಪರ್ಧೆಯಲ್ಲಿ ಭೌತವಿಜ್ಞಾನ, ಜೀವವಿಜ್ಞಾನ, ರಸಾಯನ ವಿಜ್ಞಾನ ಹಾಗೂ ಗಣಿತ ವಿಭಾಗಗಲ್ಲಿ ಭಾಗವಹಿಸಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಪಡೆದ ತಲಾ ಇಬ್ಬರು ವಿದ್ಯಾರ್ಥಿಗಳಂತೆ ಒಟ್ಟು 8 ವಿದ್ಯಾರ್ಥಿಗಳನ್ನು ಒಂದು

ವಿಶ್ವವಿದ್ಯಾಲಯದಿಂದ ಆಯ್ಕೆ ಮಾಡಲಾಗುತ್ತದೆ. ಒಟ್ಟು 11 ವಿಶ್ವವಿದ್ಯಾಲಯಗಳಿಂದ 88 ವಿದ್ಯಾರ್ಥಿಗಳು ಅಕ್ಟೋಬರ್ ತಿಂಗಳಿನಲ್ಲಿ ಹೊಸಪೇಟೆಯಲ್ಲಿ ಜರುಗುವ ರಾಜ್ಯ ಮಟ್ಟದ ಕನ್ನಡ ವಿಜ್ಞಾನ ಉಪನ್ಯಾಸ ಸ್ಪರ್ಧೆಯಲ್ಲಿ ಭಾಗಹಿಸಲಿದ್ದಾರೆ.

ಆಸಕ್ತ ವಿದ್ಯಾರ್ಥಿಗಳು ನಿಗದಿತ ಅರ್ಜಿಯನ್ನು ಸೆಪ್ಟೆಂಬರ್ 8 ರೊಳಗಾಗಿ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ಕೇಂದ್ರ ಕಚೇರಿಗೆ ಸಲ್ಲಿಸಬಹುದಾಗಿದೆ.

ಅಂತರ ವಿಶ್ವವಿದ್ಯಾಲಯ ಮಟ್ಟ ಮತ್ತು ರಾಜ್ಯ ಮಟ್ಟದ ಕನ್ನಡ ವಿಜ್ಞಾನ ಉಪನ್ಯಾಸ ಸ್ಪರ್ಧೆಯಲ್ಲಿ ವಿಜೇತರಿಗೆ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು.

ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ ದೂರವಾಣಿ ಸಂಖ್ಯೆ 080–2671839, 9483549159, 9449530245, 9008442557ನ್ನು ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ದ್ರಾವಿಡ ರಾಜ್ಯಗಳ ಎಲ್ಲಾ ಭಾಷೆಗಳನ್ನೂ ಒಳಗೊಳ್ಳುವ 'ದ್ರಾವಿಡ ಭಾಷಾ ಸಮಾವೇಶ'**

ಬೆಂಗಳೂರು, ಆಗಸ್ಟ್ 29, (ಕರ್ನಾಟಕ ವಾರ್ತೆ) :

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನವೆಂಬರ್ 2018ರಲ್ಲಿ ದ್ರಾವಿಡ ಭಾಷಾ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ.

ದ್ರಾವಿಡ ಭಾಷಾ ಬಳಗಕ್ಕೆ ಸೇರಿದ ಎಲ್ಲಾ ಭಾಷೆಗಳನ್ನೂ ಒಗ್ಗೂಡಿಸುವ ಸಲುವಾಗಿ ಮತ್ತು ಆಯಾ ಭಾಷೆಗಳ ಅಸ್ಮಿತೆಯನ್ನು ಗೌರವಿಸುವ ಪರಸ್ಪರ ಭಾಷಾ ಸೌಹಾರ್ದತೆಯನ್ನು ಬೆಳೆಸುವ ನಿಟ್ಟಿನಲ್ಲಿ ಈ ಸಮಾವೇಶವನ್ನು ಆಯೋಜಿಸಲಾಗುತ್ತಿದೆ.

ಸಾವಿರಾರು ವರ್ಷಗಳ ಲಿಪಿ ರೂಪದ ಇತಿಹಾಸಗಳಿರುವ ಈ ದ್ರಾವಿಡ ಭಾಷೆಗಳು ಅವುಗಳ ಮೂಲ ಲಿಪಿ ವಿಕಾಸವಾದಂತೆ ಭಿನ್ನತೆ ಹೊಂದಿದ್ದರೂ ಸಹ ಅವುಗಳ ಸಮಾನ ಸ್ವರೂಪಗಳನ್ನು ಉಳಿಸಿಕೊಂಡಿದ್ದು, ಬಹುತ್ವ ಭಾರತದ ಸಂದರ್ಭದಲ್ಲಿ ಈ ಭಾಷೆಗಳ ಐಕ್ಯತೆ ಮತ್ತು ಅಸ್ತಿತ್ವವನ್ನು ಉಳಿಸುವ ಉದ್ದೇಶದಿಂದ ದ್ರಾವಿಡ ಸಮಾವೇಶವನ್ನು ಭಾಷಾ ಭಾವೈಕ್ಯತೆಯ ಸಮಾವೇಶವಾಗಿ ರೂಪಿಸಲಾಗುತ್ತಿದೆ.

ಆದರೆ, ಸದರಿ ದ್ರಾವಿಡ ಭಾಷಾ ಸಮಾವೇಶದಿಂದ ತುಳು ಮತ್ತು ಕೊಡವ ಭಾಷೆಗಳನ್ನು ಕಡೆಗಣಿಸಲಾಗುತ್ತಿದೆ ಹೊರಗಿಡಲಾಗುತ್ತಿದೆ ಎನ್ನುವ ಆರೋಪದ ಕೂಗು ಎದ್ದಿದೆ. ಇದು ಸಂಪೂರ್ಣವಾಗಿ ಸುಳ್ಳು ಸುದ್ದಿ.

ದಿನಾಂಕ: 18.8.2018ರಂದು ದ್ರಾವಿಡ ಭಾಷಾ ಸಮಾವೇಶದ ಪೂರ್ವಭಾವಿ ಸಭೆಗೆ ತುಳು ಮತ್ತು ಕೊಡವ ಅಕಾಡೆಮಿಯ ಅಧ್ಯಕ್ಷರನ್ನೂ ಆಹ್ವಾನಿಸಲಾಗಿತ್ತು. ಕಾರಣಾಂತರಗಳಿಂದ ಅವರು ಸಭೆಗೆ ಆಗಮಿಸಿರಲಿಲ್ಲ. ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಯಾವುದೇ ಕಾರಣಕ್ಕೂ ರಾಜ್ಯದ ಭಾಷೆಗಳನ್ನು ಕಡೆಗಣಿಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿಲ್ಲ.

ಒಂದು ಭಾಷೆ ಮತ್ತೊಂದು ಭಾಷೆಯ ಜೊತೆಗೆ ಸೌಹಾರ್ದಯುತವಾಗಿರುವಂತೆ ಮತ್ತು ಎಲ್ಲಾ ಭಾಷೆಗಳಿಗೂ ಸಮಾನ ಗೌರವ ಸಿಗುವಂತೆ ಒಕ್ಕೂಟ ವ್ಯವಸ್ಥೆಯಲ್ಲಿ ಸ್ಥಾನವಿರಬೇಕೆನ್ನುವುದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದುದ್ದೇಶ.

ಭಾಷೆಯ ಬಲವಂತದ ಹೇರಿಕೆಯನ್ನಷ್ಟೇ ಕನ್ನಡ ಅಭಿವೃದ್ಧಿ ಪ್ರಾಧಿಕಾರ ವಿರೋಧಿಸುತ್ತದೆ. ರಾಜ್ಯದ ಭಾಷೆಗಳಾದ ಕನ್ನಡ, ಕೊಡವ, ತುಳು, ಅರೆಭಾಷೆಗಳೂ ಸಹ ತನ್ನದೇ ಅಸ್ತಿತ್ವವನ್ನು ಹೊಂದಿದ್ದು ಅವುಗಳನ್ನೂ ಒಳಗೊಂಡು ಭಾಷಾ ಸಮಾವೇಶವನ್ನು ರೂಪಿಸುವುದು ಪ್ರಾಧಿಕಾರದ ಹೊಣೆಗಾರಿಕೆಯೂ ಆಗಿದೆ.

ಇಂತಹ ಹೊಣೆಗಾರಿಕೆಯಿಂದ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಯಾವತ್ತೂ ಹಿಂದೆ ಸರಿದಿಲ್ಲ. ಪ್ರಸ್ತುತ ಸ್ಥಳೀಯ ಭಾಷೆಗಳ ಅಸ್ಮಿತೆಯನ್ನು ಪಾರಂಪರಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ಹಿನ್ನೆಲೆಯಲ್ಲಿ ಕಾಪಾಡುವುದಕ್ಕೆ ಪೂರಕವಾಗುವ ಕೆಲಸಗಳಾಗಬೇಕಿದ್ದು ಇದಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮುನ್ನುಡಿ ಬರೆಯುವ ಕೆಲಸ ಮಾಡುತ್ತಿದೆ.

ಭಾಷೆಯ ಮೂಲಕ ಪರಸ್ಪರರ ಸಂಸ್ಕೃತಿಯನ್ನು ಅರಿಯುವ ಮತ್ತು ಗೌರವಿಸುವ ಹೊಣೆಗಾರಿಕೆಯನ್ನು ಅರಿತು ಕನ್ನಡ ಅಭಿವೃದ್ಧಿ ಪ್ರಾಧಿಕಾರ ಸಮಾವೇಶ ಆಯೋಜಿಸಲು ಮುಂದಾಗಿದೆ.

ಆದ್ದರಿಂದ ಯಾವುದೇ ಭಾಷೆಯನ್ನು ಕಡೆಗಣಿಸಲಾಗುತ್ತಿದೆ ಎನ್ನುವ ಧೋರಣೆಯ ಸುಳ್ಳು ಸುದ್ದಿಗಳಿಗೆ ಆಸ್ಪದ ನೀಡದಂತೆ ದ್ರಾವಿಡ ಭಾಷಾ ಸಮಾವೇಶಕ್ಕೆ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಎಲ್ಲರ ಸಹಕಾರ ಕೋರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## ಎಸಿಬಿ ದಾಳಿ

ಬೆಂಗಳೂರು, ಆಗಸ್ಟ್ 29, (ಕರ್ನಾಟಕ ವಾರ್ತೆ) :

ಇಂದು ಭ್ರಷ್ಟಾಚಾರ ನಿಗ್ರಹ ದಳವು ಶ್ರೀ.ಕೆ.ಪಿ.ಸಂಜೀವಪ್ಪ, ಎಕ್ಸಿಕ್ಯೂಟಿವ್ ಆಫೀಸರ್, ಗ್ರಾಮೀಣ ಅಭಿವೃದ್ಧಿ & ಪಂಚಾಯತ್ ರಾಜ್ ಇಲಾಖೆ, ತಾಲ್ಲೂಕು ಪಂಚಾಯತ ಚಿಕ್ಕಬಳ್ಳಾಪುರ ತಾಲ್ಲೂಕು, ಚಿಕ್ಕಬಳ್ಳಾಪುರ ಎಂಬುವವರು ತಮ್ಮ ಬಲ್ಲ ಮೂಲಗಳಿಂದ ಅಸಮತೋಲನ ಆಸ್ತಿ ಪಾಸ್ತಿಗಳನ್ನು ಹೊಂದಿರುವ ಬಗ್ಗೆ ವಿಶ್ವಾಸಾರ್ಹ ಮಾಹಿತಿ ಸಂಗ್ರಹಿಸಿ ಅಕ್ರಮ ಆಸ್ತಿಗಳಿಕೆ ಪ್ರಕರಣವನ್ನು ದಾಖಲಿಸಿ ಅವರಿಗೆ ಸಂಬಂಧಿಸಿದ ಅವರ ಕುಟುಂಬದವರು ವಾಸವಿರುವ ಮನೆಯಾದ ಬಿಟಿಎಂ ಲೇಔಟ್, ಬೆಂಗಳೂರು ಹಾಗೂ ಇವರು ವಾಸವಿರುವ ಚಿಕ್ಕಬಳ್ಳಾಪುರ ವಸತಿ ಗೃಹ ಹಾಗೂ ಇವರು ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿ ಮೇಲೆ ದಾಳಿ ನಡೆಸಲಾಗಿರುತ್ತದೆ.

ಎಸಿಬಿ ಚಿಕ್ಕಬಳ್ಳಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ಎಸಿಬಿ ಕೇಂದ್ರ ವಲಯದ ವಿವಿಧ ತಂಡಗಳಿಂದ ಮೇಲ್ಕಂಡ ಆರೋಪಿತ ಸರ್ಕಾರಿ ನೌಕರರ ವಿರುದ್ಧ ದಾಳಿ ಮುಂದುವರೆದಿದ್ದು, ಸದರಿ ಸರ್ಕಾರಿ ನೌಕರರು ಹೊಂದಿರುವ ಆಸ್ತಿ–ಪಾಸ್ತಿಗಳ ಮೂಲದ ಬಗ್ಗೆ ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 898/998**

## ACB Raid

Bengaluru, Aug 29, (Karnataka Information): Today ACB has conducted raids over the properties of Shri.K.P Sanjevappa, Executive Officer, Rural Development and Panchayat Raj department, Taluk Panchayat, Chikkaballapura Taluk, Chikkaballapura

who is belived to have amassed disproportionate assets beyond his known sources of income.

Raids were conducted at Two places connected to this official 1) his place of residence at B.T.M Layout, Bengaluru, 2) his Quarters at Chikkaballapura and 3) Office are being searched.

A Case against the official mentioned above is registered at Chikkaballapura ACB police station. Search and verification of properties by the ACB teams is continued to find out the source of income and other possible places for the search.

## ಜೂನಿಯರ್ ಸೈಂಟಿಫಿಕ್ ಆಫೀಸರ್ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 29, (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿನ ರಸಾಯನಶಾಸ್ತ್ರ ಉಪನ್ಯಾಸಕರ ಮತ್ತು ಔಷಧ ನಿಯಂತ್ರಣ ಇಲಾಖೆಯಲ್ಲಿನ ಜೂನಿಯರ್ ಸೈಂಟಿಫಿಕ್ ಆಫೀಸರ್ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗಳನ್ನು ಅನುಕ್ರಮವಾಗಿ ಆಗಸ್ಟ್ 27 ಮತ್ತು 28 ರಂದು ಆಯೋಗದ ಅಂತರ್ಜಾಲ "http://kpsc.kar.nic.in/Selection Lists" ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಸದರಿ ಆಯ್ಕೆಪಟ್ಟಿಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ರಸಾಯನಶಾಸ್ತ್ರ ಹುದ್ದೆಗೆ ಸೆಪ್ಟೆಂಬರ್ 2 ಮತ್ತು ಜೂನಿಯರ್ ಸೈಂಟಿಫಿಕ್ ಆಫೀಸರ್ ಹುದ್ದೆಗಳಿಗೆ ಸೆಪ್ಟೆಂಬರ್ 3 ರೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001, ಇವರಿಗೆ ಸಲ್ಲಿಸಬಹುದೆಂದು ಹಾಗೂ ನಿಗದಿತ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 29, (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ವಸತಿ ಶಾಲೆಗಳಲ್ಲಿನ ದೈಹಿಕ ಶಿಕ್ಷಣ ಶಿಕ್ಷಕರು 26 (18+08 ಹೈ.ಕ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಆಗಸ್ಟ್ 28 ರಂದು ಆಯೋಗದ ವೆಬ್‌ಸೈಟ್ http://kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಈ ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯ್ಕೆಪಟ್ಟಿ ಪ್ರಕಟಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ

ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001 ಇವರಿಗೆ ಸಲ್ಲಿಸಬಹುದು. ನಿಗದಿತ ದಿನಾಂಕದ ನಂತರ ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

## ಸಾರ್ವಜನಿಕರ ಗಮನಕ್ಕೆ

ಬೆಂಗಳೂರು, ಆಗಸ್ಟ್ 29, (ಕರ್ನಾಟಕ ವಾರ್ತೆ) :

ವಿಶ್ವ ಕಲ್ಯಾಣ ಚಿಟ್ಸ್ ಪ್ರೈ. ಲಿ. ನಂ 3/2, ತಿಮ್ಮಯ್ಯ ಟವರ್ಸ್, 4ನೇ ಮಹಡಿ, 1ನೇ ಅಡ್ಡರಸ್ತೆ, ಗಾಂಧಿನಗರ, ಬೆಂಗಳೂರು – 560 009 ಈ ಸಂಸ್ಥೆಯು ರಿಜಿಸ್ಟ್ರಾರ್ ಆಫ್ ಕಂಪನೀಸ್‌ನಲ್ಲಿ ನೊಂದಣಿಗೊಂಡು ಚೀಟಿ ವ್ಯವಹಾರ ನಡೆಸುತ್ತಿರುವುದಾಗಿ ತಿಳಿಸಿ, ಚೀಟಿ ವ್ಯವಹಾರವನ್ನು ನಡೆಸಲು ನೀಡಿರುವ ಆದೇಶವನ್ನು ರದ್ದುಪಡಿಸಲು ಕೋರಿರುತ್ತಾರೆ.

ಕಂಪನಿಯ ಕೋರಿಕೆ ಬಗ್ಗೆ ಪರಿಶೀಲಿಸಬೇಕಾಗಿದೆ. ಈ ಸಂಸ್ಥೆಯಲ್ಲಿ ಯಾವುದೇ ಚಂದಾದಾರರು/ಸಾರ್ವಜನಿಕರು ಹಣ ಪಾವತಿಸಿ ಬಾಕಿ ಇದ್ದಲ್ಲಿ ಅಥವಾ ಚೀಟಿ ಸಂಸ್ಥೆಯಿಂದ ಯಾವುದೇ ಹಣ ಬರಬೇಕಾಗಿದ್ದಲ್ಲಿ ಲಿಖಿತ ರೂಪದಲ್ಲಿ ಹದಿನೈದು ದಿನಗಳೊಳಗಾಗಿ ಸಹಕಾರ ಸಂಘಗಳ ನಿಬಂಧಕರ ಕಚೇರಿ, ನಂ 1, ಆಲಿ ಆಸ್ಕರ ರಸ್ತೆ, ಬೆಂಗಳೂರು – 52 ಈ ವಿಳಾಸಕ್ಕೆ ತಿಳಿಸತಕ್ಕದ್ದು, ತಪ್ಪಿದಲ್ಲಿ ಕಾನೂನು ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಹಕಾರ ಸಂಘಗಳ ನಿಬಂಧಕರು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 29, (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕಸೇವಾ ಆಯೋಗವು ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಅಲ್ಪಸಂಖ್ಯಾತರ ಮಾದರಿ ವಸತಿ ಶಾಲೆಯಲ್ಲಿನ (ನವೋದಯ) ದಲ್ಲಿ ಕನ್ನಡ ಶಿಕ್ಷಕರು 05+01 (ಹೈ.ಕ), ಗಣಿತ ಶಿಕ್ಷಕರು 05 + 01 (ಹೈ.ಕ), ಸಮಾಜ ವಿಜ್ಞಾನ ಶಿಕ್ಷಕರು 03+01 (ಹೈ.ಕ), ಭೌತಶಾಸ್ತ್ರ ಶಿಕ್ಷಕರು 03+01 (ಹೈ.ಕ.) ರಸಾಯನಶಾಸ್ತ್ರ ಶಿಕ್ಷಕರು 03+01 (ಹೈ.ಕ.) ಪ್ರಯೋಗಶಾಲಾ ಸಹಾಯಕರು 02+02 (ಹೈ.ಕ), ಗಣಕಯಂತ್ರ ಶಿಕ್ಷಕರು 03+01 (ಹೈ.ಕ) ಮತ್ತು ಪೌರಾಡಳಿತ ನಿರ್ದೇಶನಾಲಯದ ಮಹಾನಗರಪಾಲಿಕೆಯಲ್ಲಿನ ಎಲೆಕ್ಟ್ರಿಷಿಯನ್ ಗ್ರೇಡ್ – 12, ಎಲೆಕ್ಟ್ರಿಷಿಯನ್ ಗ್ರೇಡ್ – 16 ಹುದ್ದೆಗಳಿಗೆ ದಿನಾಂಕ: 27–08–2018 ರಂದು ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಆಯೋಗದ ಅಂತರ್ಜಾಲದಲ್ಲಿ “http://kpsc.kar.nic.in” ಪ್ರಕಟಿಸಲಾಗಿದೆ. ಆಕ್ಷೇಪಣೆಗಳನ್ನು ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟಿಸಲಾಗದ ದಿನಾಂಕದಿಂದ 7 ದಿನಗಳೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.